## ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 2705

ಸದಸ್ಯರ ಹೆಸರು : ಶ್ರೀ ವೈ.ಎಂ. ಸತೀಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರಿಸುವ ದಿನಾಂಕ : 25.03.2022.

ಉತ್ತರಿಸುವವರು : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು.

<table>
<tr><th>ಕ್ರಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>(ಅ)</td><td>ಬಳ್ಳಾರಿ ಜಿಲ್ಲೆ ಹಾಗೂ ವಿಜಯನಗರ ಜಿಲ್ಲೆಗಳಲ್ಲಿರುವ ಗ್ರಾಮ ಪಂಚಾಯತಿಗಳ ಸಂಖ್ಯೆ ಎಷ್ಟು; ಇವುಗಳಿಗೆ ಆಯ್ಕೆಯಾಗಿರುವ ಸದಸ್ಯರುಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)</td><td rowspan="2">ಬಳ್ಳಾರಿ ಮತ್ತು ವಿಜಯನಗರ ಜಿಲ್ಲೆಗಳಲ್ಲಿರುವ ಗ್ರಾಮ ಪಂಚಾಯಿತಿಗಳ ಸಂಖ್ಯೆ, ಆಯ್ಕೆಯಾಗಿರುವ ಸದಸ್ಯರ ಸಂಖ್ಯೆ, ಸ್ವಂತ ಕಟ್ಟಡ ಹೊಂದಿರುವ ಮತ್ತು ಸ್ವಂತ ಕಟ್ಟಡ ಹೊಂದದಿರುವ ಗ್ರಾಮ ಪಂಚಾಯತಿಗಳ ಜಿಲ್ಲಾವಾರು ವಿವರ ಕೆಳಕಂಡಂತಿದೆ.-
<table>
<tr><th>ಜಿಲ್ಲೆ</th><th>ಒಟ್ಟು ಗ್ರಾಮ ಪಂಚಾಯಿತಿಗಳ ಸಂಖ್ಯೆ</th><th>ಆಯ್ಕೆಯಾದ ಸದಸ್ಯರ ಸಂಖ್ಯೆ</th><th>ಸ್ವಂತ ಕಟ್ಟಡ ಹೊಂದಿರುವ ಗ್ರಾಮ ಪಂಚಾಯಿತಿಗಳ ಸಂಖ್ಯೆ</th><th>ಸ್ವಂತ ಕಟ್ಟಡ ಹೊಂದದಿರುವ ಗ್ರಾಮ ಪಂಚಾಯತಿಗಳ ಸಂಖ್ಯೆ</th></tr>
<tr><td>ಬಳ್ಳಾರಿ</td><td>100</td><td>1971</td><td>92</td><td>8</td></tr>
<tr><td>ವಿಜಯನಗರ</td><td>137</td><td>2410</td><td>129</td><td>8</td></tr>
</table></td></tr>
<tr><td>(ಆ)</td><td>ಬಳ್ಳಾರಿ ಮತ್ತು ವಿಜಯನಗರ ಜಿಲ್ಲೆಗಳಲ್ಲಿ ಸ್ವಂತ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಗ್ರಾಮ ಪಂಚಾಯತಿಗಳ ಸಂಖ್ಯೆ ಎಷ್ಟು; ಸ್ವಂತ ಕಟ್ಟಡಗಳಿಲ್ಲದ ಗ್ರಾಮ ಪಂಚಾಯತಿಗಳ ಸಂಖ್ಯೆ ಎಷ್ಟು; (ವಿವರ ನೀಡುವುದು)</td></tr>
<tr><td>(ಇ)</td><td>ಸ್ವಂತ ಕಟ್ಟಡಗಳಿಲ್ಲದ ಪಂಚಾಯತ್‌ಗಳಿಗೆ ಸ್ವಂತ ಕಟ್ಟಡಗಳನ್ನು ಕಟ್ಟಲು ಸರ್ಕಾರ ಕೈಗೊಂಡ ಕ್ರಮಗಳೇನು; ಯಾವ ಕಾಲ ಮಿತಿಯಲ್ಲಿ ಕಟ್ಟಡಗಳನ್ನು ಕಟ್ಟಲಾಗುವುದು?</td><td>ಹೊಸದಾಗಿ ರಚನೆಯಾದ ಗ್ರಾಮ ಪಂಚಾಯತಿ ಕಛೇರಿಗೆ ರೂ 40.00 ಲಕ್ಷಗಳ ಅಂದಾಜು ವೆಚ್ಚದಲ್ಲಿ ಕಟ್ಟಡಗಳನ್ನು ನಿರ್ಮಿಸಲು ಉದ್ದೇಶಿಸಲಾಗಿದ್ದು ಈ ಪೈಕಿ ಸರ್ಕಾರದ ಅನುದಾನ ರೂ.20.00 ಲಕ್ಷ, ಮಹಾತ್ಮ ಗಾಂಧಿ ರಾಷ್ಟ್ರೀಯ ಉದ್ಯೋಗ ಖಾತರಿ ಯೋಜನೆಯಲ್ಲಿ ಕೈಗೊಳ್ಳುವ ರಾಜೀವ ಗಾಂಧಿ ಸೇವಾ ಕೇಂದ್ರ ನಿರ್ಮಾಣ ಮಾಡಲು ಮೀಸಲಿಟ್ಟಿರುವ ಅನುದಾನ ರೂ.16.25 ಲಕ್ಷ ಹಾಗೂ 14/15ನೇ ಹಣಕಾಸು ಯೋಜನೆ ಅಥವಾ ಗ್ರಾಮ ಪಂಚಾಯತಿಗಳ ಇನ್ನಿತರೆ ಅನುದಾನದಡಿ ಉಳಿಕೆಯಾಗಿರುವ ರೂ.3.75 ಲಕ್ಷಗಳನ್ನು ಬಳಸಿಕೊಳ್ಳಲು ನಿರ್ಧರಿಸಲಾಗಿರುತ್ತದೆ. ಇದಲ್ಲದೆ ಗ್ರಾಮ ಪಂಚಾಯತಿಗಳು ಹೈದರಾಬಾದ್ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ ಯೋಜನೆ ಅನುದಾನ ಮತ್ತು ಸ್ವಂತ ಸಂಪನ್ಮೂಲದಿಂದ ಕಛೇರಿ ಕಟ್ಟಡವನ್ನು ನಿರ್ಮಿಸಿಕೊಳ್ಳಬಹುದಾಗಿದೆ.</td></tr>
</table>

ಗ್ರಾಅಪ 161 ಗ್ರಾಪಂಅ 2022

(ಕೆ.ಎಸ್. ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು.